All India Radio: Bangalore
Regional Bulletin In Kannada
01.11.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯಾದ್ಯಂತ ೭೦ನೇ ಕನ್ನಡ ರಾಜ್ಯೋತ್ಸವ : ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ
- ನಾಡಿನ ಜನತೆಗೆ ಕನ್ನಡದಲ್ಲೇ ರಾಜ್ಯೋತ್ಸವ ಶುಭ ಕೋರಿದ ಪ್ರಧಾನಿ ನರೇಂದ್ರ ಮೋದಿ
- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮೊಳಗಿದ ಕನ್ನಡ ಡಿಂಡಿಮ - ಉಸ್ತುವಾರಿ ಸಚಿವರಿಂದ ಧ್ವಜಾರೋಹಣ
- ಬೆಂಗಳೂರಿನಲ್ಲಿ ಸಂಸದ್ ಖೇಲ್ ಮಹೋತ್ಸವಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ
- ನವೋದ್ಯಮ ಸ್ಥಾಪನೆ ಮೂಲಕ ಕಲಬುರಗಿ ಜಿಲ್ಲೆಯ ಜಿಡಿಪಿ ಹೆಚ್ಚಿಸಲು ಕ್ರಮ : ಸಚಿವ ಪ್ರಿಯಾಂಕ್ ಖರ್ಗೆ

<><><><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ೮೦೦ ಕನ್ನಡ ಶಾಲೆಗಳು ಮತ್ತು ೧೦೦ ಉರ್ದು ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಅಭಿವೃದ್ಧಿಗೊಳಿಸಲಾಗುವುದು. ಜೊತೆಗೆ ಮದರಸಾಗಳಲ್ಲಿ ಕನ್ನಡ ಕಲಿಸಲು ಆದ್ಯತೆ ನೀಡಲಾಗುವುದು ಎಂದು ಘೋಷಿಸಿದರು.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

ಕನ್ನಡವನ್ನು ಹೊಸ ತಂತ್ರಜ್ಞಾನದ ಭಾಷೆಯನ್ನಾಗಿಸಲು ವಿದ್ವಾಂಸರು, ತಾಂತ್ರಿಕ ತಜ್ಞರು ಮುಂದಾಗುವಂತೆ ಕರೆ ನೀಡಿದರು. ರಾಜ್ಯದಲ್ಲಿ ಶತಮಾನ ಪೂರೈಸಿದ ಸುಮಾರು ೩ ಸಾವಿರ

ಸರ್ಕಾರಿ ಶಾಲೆಗಳಿವೆ ಎಂದು ಅವರು ಹೇಳಿದರು. ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನವೆಂಬರ್ ತಿಂಗಳಲ್ಲಿ ಖಾಸಗಿ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಕನ್ನಡ ಧ್ವಜ ಹಾರಿಸುವ ಬಗ್ಗೆ ಮುಂಬರುವ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗುವದು ಎಂದು ಸ್ಪಷ್ಟಪಡಿಸಿದ್ದಾರೆ. ಜಾಗತಿಕ ಮಟ್ಟಕ್ಕೆ ಕನ್ನಡ ಹಾಗೂ ಕರ್ನಾಟಕವನ್ನು ಕೊಂಡೊಯ್ಯುವಂತೆ ಅವರು ಕರೆ ನೀಡಿದ್ದಾರೆ. ಇದಕ್ಕು ಮೊದಲು ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಭುವನೇಶ್ವರಿ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪುಷ್ಪಾರ್ಚನೆ ಮಾಡುವ ಮೂಲಕ ಸಂಭ್ರಮದ ಕನ್ನಡದ ಹಬ್ಬ ರಾಜ್ಯೋತ್ಸವಕ್ಕೆ ಚಾಲನೆ ನೀಡಿದರು.

<><><><>

ರಾಜ್ಯದ ವಿವಿಧೆಡೆ ಇಂದು ಕನ್ನಡ ರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ಎಲ್ಲಿ ನೋಡಿದರೂ ಕನ್ನಡದ ಬಾವುಟಗಳು ರಾರಾಜಿಸುತ್ತಿವೆ. ಬೆಂಗಳೂರಿನ ಜಿಬಿಎ ಕೇಂದ್ರ ನಗರ ಪಾಲಿಕೆ ವತಿಯಿಂದ ಮೆಯೋಹಾಲ್ ಕಟ್ಟಡದ ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು. ಈ ವೇಳೆ ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಧ್ವಜಾರೋಹಣ ನೆರವೇರಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೭೦ನೇ ಕನ್ನಡ ರಾಜ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡ ಕಲಿಕೆಗೆ ನಾವು ಪ್ರೋತ್ಸಾಹ ನೀಡಿ, ಕನ್ನಡದ ಅಸ್ಮಿತೆಯನ್ನು ಉಳಿಸಿಕೊಳ್ಳಬೇಕಿದೆ ಎಂದು ತಿಳಿಸಿದರು. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕನ್ನಡ ರಾಜ್ಯೋತ್ಸವದ ಅಂಗವಾಗಿ ಅರಮನೆ ಆವರಣದಲ್ಲಿರುವ ಭುವನೇಶ್ವರಿ ದೇವಾಲಯಕ್ಕೆ ಭೇಟಿ ನೀಡಿ ಪುಷ್ಪಾರ್ಚನೆ ಸಲ್ಲಿಸಿದರು. ಬಳಿಕ ಭುವನೇಶ್ವರಿ ತಾಯಿಯ ಮೆರವಣಿಗೆಯ ರಥಕ್ಕೆ ಚಾಲನೆ ನೀಡಿದರು. ಜಿಲ್ಲಾಡಳಿತ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿ ನಾಡಧ್ವಜಕ್ಕೂ ಚಾಲನೆ ನೀಡಿದರು. ಹಾವೇರಿಯ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿಂದು ಆಯೋಜಿಸಿದ್ದ ೭೦ನೇ ಕರ್ನಾಟಕ ರಾಜ್ಯೋತ್ಸವದ ಧ್ವಜಾರೋಹಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ನೆರವೇರಿಸಿದರು. ಮಂಡ್ಯದಲ್ಲಿ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ

ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡ ಸಾಹಿತ್ಯಕ್ಕೆ ದೊರೆತಿರುವ ೮ ಜ್ಞಾನಪೀಠ ಪ್ರಶಸ್ತಿಗಳೇ ನಮ್ಮ ಭಾಷೆಯ ಶ್ರೀಮಂತಿಕೆಗೆ ಸಾಕ್ಷಿ. ಬಸವಣ್ಣನವರ ವಚನಗಳು, ದಾಸರ ಕೀರ್ತನೆಗಳು, ಕವಿಗಳ ಕಾವ್ಯಗಳು ಕನ್ನಡಿಗರ ಅಸ್ಮಿತೆ ಎಂದು ಬಣ್ಣಿಸಿದರು.

ಕೋಲಾರ ನಗರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಸುರೇಶ್ ಕನ್ನಡ  ಭಾಷೆ ಉಳಿಸಿ, ಬೆಳೆಸಬೇಕಾದರೆ ಎಲ್ಲರೂ ಪ್ರತಿನಿತ್ಯ ಕನ್ನಡ ಮಾತನಾಡಬೇಕು ಎಂದು ಅಭಿಪ್ರಾಯಪಟ್ಟರು. ವಿಜಯಪುರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್ ಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿದರು.  ದೇಶದ ಭಾಷೆಗಳಲ್ಲಿ ಕನ್ನಡ ೪ನೇ ಸ್ಥಾನದಲ್ಲಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.  ೭೦ನೇ ಕನ್ನಡ ರಾಜ್ಯೋತ್ಸವ ಸಮಾರಂಭದ ಧ್ವಜಾರೋಹಣ ನೆರವೇರಿಸಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಮಡಿಕೇರಿಯಲ್ಲಿ ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜ್, ಕನ್ನಡ, ಕರ್ನಾಟಕ, ಕರುನಾಡು ಎಂಬುದು ಕೇವಲ ಬರೀ ನೆಲ ಮತ್ತು ಭಾಷೆಯಲ್ಲ. ಅದೊಂದು ಕನ್ನಡಿಗರ ಭಾವನೆ ಮತ್ತು ಬಾಂಧವ್ಯವಾಗಿದೆ ಎಂದು ಹೇಳಿದರು. ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ನೆಹರೂ ಮೈದಾನದಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಪೊಲೀಸ್ ಗೌರವ ವಂದನೆ ಸ್ವೀಕರಿಸಿ ರಾಜ್ಯೋತ್ಸವ ಸಂದೇಶ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಕನ್ನಡ ನಾಡಿನ ಇತಿಹಾಸ, ಪರಂಪರೆ, ಸಾಂಸ್ಕೃತಿಕ ತುಂಬಾ ವೈಶಿಷ್ಟ್ಯತೆಯಿಂದ ಕೂಡಿದೆ.  ಪ್ರತಿಯೊಬ್ಬರೂ ಕನ್ನಡ ಭಾಷೆ, ಸಂಸ್ಕೃತಿಯನ್ನು ಗೌರವಿಸುವ ಮೂಲಕ ಬೆಳೆಸಬೇಕು ಎಂದು ಕರೆ ನೀಡಿದರು. ಕನ್ನಡ ಭಾಷೆಯು ಸುಮಾರು ೨ ಸಾವಿರ ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ  ದಕ್ಷಿಣ ಭಾರತದ ಪ್ರಮುಖ ಭಾಷೆಯಾಗಿದೆ ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಅಭಿಪ್ರಾಯಪಟ್ಟಿದ್ದಾರೆ.

<><><>

ಇಂದು ೭೦ನೇ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಈ ವಿಶೇಷ ಸಂದರ್ಭದಲ್ಲಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ

ಕನ್ನಡದಲ್ಲಿಯೇ ಕರ್ನಾಟಕದ ಜನತೆಗೆ ಶುಭ ಹಾರೈಸಿದ್ದಾರೆ. ಸಾಹಿತ್ಯ, ಕಲೆ, ಸಂಗೀತ ಮತ್ತಿತರ ಕ್ಷೇತ್ರಗಳಲ್ಲಿ ಪ್ರತಿಫಲಿಸುವ ಕರ್ನಾಟಕದ ಶ್ರೀಮಂತ ಸಂಸ್ಕೃತಿಯನ್ನು ನಾವು ಆಚರಿಸುತ್ತಿದ್ದೇವೆ. ಕರ್ನಾಟಕದ ಜನರು ಸಂತೋಷ ಮತ್ತು ಆರೋಗ್ಯದಿಂದ ಇರಲಿ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರಾರ್ಥಿಸಿದ್ದಾರೆ.

<><><>

ಬೆಂಗಳೂರು ನಾಗರಿಕರಿಗೆ ಉತ್ತಮ ಸೇವೆ ನೀಡುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಿ ೫ ನಗರ ಪಾಲಿಕೆಗಳನ್ನು ಸ್ಥಾಪಿಸಲಾಗಿದೆ ಎಂದು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಿ, ನಾಡದೇವಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಮುಂಬರುವ ವರ್ಷದಲ್ಲಿ ಕನ್ನಡ ರಾಜ್ಯೋತ್ಸವವನ್ನು ಹಬ್ಬದ ವಾತಾವರಣ ಇರುವ ಹಾಗೆ ವಿಜೃಂಭಣೆಯಿಂದ ಆಚರಿಸಬೇಕು ಎಂದು ಕರೆ ನೀಡಿದ್ದಾರೆ.

<><><>

ವಿಕಸಿತ ಭಾರತಕ್ಕೆ ಯುವಶಕ್ತಿಯನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ದೇಶಾದ್ಯಂತ ಸಂಸದ್ ಖೇಲ್ ಮಹೋತ್ಸವ ನಡೆಯುತ್ತಿದೆ. ಇದರ ಭಾಗವಾಗಿ ಬೆಂಗಳೂರಿನ ಮಲ್ಲೇಶ್ವರಂ ಮೈದಾನದಲ್ಲಿ ನಡೆದ ಸಂಸದ್ ಕ್ರೀಡಾ ಮಹೋತ್ಸವಕ್ಕೆ ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಖಾತೆ ಕೇಂದ್ರದ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಯುವ ಪೀಳಿಗೆಯ ಜನರು ಕ್ರೀಡಾಕ್ಷೇತ್ರದಲ್ಲಿ ಸಾಧನೆ ಮಾಡುವಂತೆ ಕರೆ ನೀಡಿದರು. ಅಂಜು ಬಾಬಿ ಜಾರ್ಜ್, ಧ್ಯಾನ್ ಕಶ್ಯಪ್ ಸೇರಿದಂತೆ ಹಲವು ಕ್ರೀಡಾಪಟುಗಳು ದೇಶದ ಕೀರ್ತಿ ಪತಾಕೆಯನ್ನು ಎತ್ತಿ ಹಿಡಿದಿದ್ದಾರೆ. ಅವರಂತೆ ಭಾರತದಲ್ಲಿ ನಡೆಯುವ ೨೦೩೬ರ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಅತಿಹೆಚ್ಚು ಪದಕಗಳನ್ನು ಗೆದ್ದು, ದೇಶಕ್ಕೆ ಕೀರ್ತಿ ತರುವಂತೆ ಕ್ರೀಡಾಪಟುಗಳಿಗೆ ತಿಳಿಸಿದ್ದಾರೆ. ಈ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕ್ರೀಡಾ ಪಟುಗಳನ್ನು ಅವರು ಗೌರವಿಸಿದರು.

<><><>

ಕಲಬುರಗಿ ಜಿಲ್ಲೆಯನ್ನು ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮದಡಿಯಲ್ಲಿ ಪ್ರವಾಸೋದ್ಯಮ, ಕೃಷಿ, ಕೈಗಾರಿಕೆ, ತಂತ್ರಜ್ಞಾನ, ಎಲೆಕ್ಟ್ರಾನಿಕ್, ಉದ್ಯಮಶೀಲತೆ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸುವ

ಮೂಲಕ ರಾಜ್ಯದ ಜಿಡಿಪಿಗೆ ಹೆಚ್ಚಿನ ಕೊಡುಗೆ ನೀಡಲು ಪ್ರಯತ್ನಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಜಿಡಿಪಿಗೆ ಬೆಂಗಳೂರು ಶೇಕಡ ೪೦ರಷ್ಟು ಕೊಡುಗೆ ನೀಡಿದ್ದರೆ, ದಕ್ಷಿಣಕನ್ನಡ- ಶೇಕಡ ೪.೫, ಬೆಂಗಳೂರು ಗ್ರಾಮೀಣ- ಶೇಕಡ ೧ ಹಾಗೂ ಕಲಬುರಗಿ ಶೇಕಡ ೧.೯ ರಷ್ಟು ಕೊಡುಗೆ ನೀಡುತ್ತಿವೆ. ನವೋದ್ಯಮ ಸ್ಥಾಪನೆ, ಕೈಗಾರಿಕೆಗಳ ಅಭಿವೃದ್ಧಿ, ಉದ್ಯೋಗ ಸೃಷ್ಟಿ, ಮಾನವ ಸಂಪನ್ಮೂಲ ಬೆಳವಣಿಗೆ, ಕೌಶಲ್ಯ ಅಭಿವೃದ್ಧಿ, ಆವಿಷ್ಕಾರ ಕೇಂದ್ರ, ಕೃಷಿ ವಲಯದ ಸ್ಥಿರತೆ, ಪ್ರವಾಸೋದ್ಯಮ ಬಲಪಡಿಸುವ ಗುರಿಯೊಂದಿಗೆ ನವ-ಕಲಬುರಗಿಯನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಘೋಷಿಸಿದ್ದಾರೆ. ಕಲಬುರಗಿಯ ಜಿಡಿಪಿಯನ್ನು ಶೇಕಡ ೧.೯ರಿಂದ ಶೇಕಡ ೨.೧೫ ರಷ್ಟಕ್ಕೆ ಹೆಚ್ಚಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>